ಪ್ರಾಥಮಿಕ & ಪ್ರೌಡ ಶಾಲೆಗಳಲ್ಲಿ ಯೋಗ

1384(404); ಶ್ರೀ ಕ್ಯಾತ್ಸಂದ್ರ ಎನ್. ರಾಜಣ್ಣ

ಅ) ಮುಂದಿನ ಯುವಜನಾಂಗದ ಆರೋಗ್ಯದ ದೃಷ್ಟಿಯಿಂದ ಶಾಲಾ ಮಕ್ಕಳಿಗೆ ಯೋಗಾಭ್ಯಾಸ ಅವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು);

ಆ) ಬಂದಿದ್ದಲ್ಲಿ 1 ರಿಂದ 12ನೇ ತರಗತಿಯವರೆಗೆ ಶಾಲಾ/ಕಾಲೇಜುಗಳಲ್ಲಿ 'ಯೋಗ' ಕಡ್ಡಾಯಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಶಾಲಾ ಮಕ್ಕಳಿಗೆ ಯೋಗ ಕಲಿಸುವ ಬಗ್ಗೆ ಯಾವ ಕಾಲಮಿತಿಯಲ್ಲಿ ಸರ್ಕಾರ ಕ್ರಮ ತೆಗೆದುಕೊಳ್ಳುವುದು (ವಿವರ ನೀಡುವುದು);

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಯೋಗ ಶಿಕ್ಷಣ, ದೈಹಿಕ ಶಿಕ್ಷಣದ ಭಾಗವಾಗಿದ್ದು, ಪ್ರಾಥಮಿಕ ಶಾಲೆಗಳಲ್ಲಿ 1 ರಿಂದ 5ನೇ ತರಗತಿಯವರೆಗೆ ದೈಹಿಕ ಶಿಕ್ಷಣವನ್ನು ಅನೌಪಚಾರಿಕ ಚಟುವಟಿಕೆಯಾಗಿ ಕಲಿಸಲಾಗುತ್ತಿದೆ ಹಾಗೂ ಇತರೆ ವಿಷಯಗಳಂತೆ ಪಠ್ಯ ಪುಸ್ತಕಗಳನ್ನು ಒದಗಿಸಿ ದೈಹಿಕ ಶಿಕ್ಷಣದೊಂದಿಗೆ ಯೋಗಾಭ್ಯಾಸವನ್ನು ಕಲಿಸಲಾಗುತ್ತಿದೆ.

ಆ) ಪ್ರೊ. ಎಲ್.ಆರ್ ವೈದ್ಯನಾಥನ್ ವರದಿಯನ್ವಯ 6 ರಿಂದ 10ನೇ ತರಗತಿಯವರೆಗೆ ಪಠ್ಯ ಪುಸ್ತಕಗಳನ್ನು ಒದಗಿಸಿ ದೈಹಿಕ ಶಿಕ್ಷಣದೊಂದಿಗೆ ಯೋಗಾಭ್ಯಾಸವನ್ನು ಬೋಧಿಸಲಾಗುತ್ತಿದೆ. ಶೈಕ್ಷಣಿಕವಾಗಿ ಹಿಂದುಳಿದಿರುವ ಮತ್ತು ವಿದ್ಯಾರ್ಥಿಗಳ ಸಂಖ್ಯೆ 500 ಕ್ಕಿಂತ ಹೆಚ್ಚಿರುವ 16 ಜಿಲ್ಲೆಗಳ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಮತ್ತು ಯೋಗ ಶಿಕ್ಷಣ ಬೋಧಿಸಲು 39 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ಸೃಜಿಸಲಾಗಿದೆ.

ಇ) ಯೋಗ ಶಿಕ್ಷಣದ ಬಗ್ಗೆ ವಿಷಯವನ್ನು ಅಳವಡಿಸಿ ತಾತ್ವಿಕ ಮತ್ತು ಪ್ರಾಯೋಗಿಕವಾಗಿ ಕಲಿಸಲಾಗುತ್ತಿದೆ. ಶಾಲಾ ಮಟ್ಟದಿಂದ ರಾಜ್ಯ ಮಟ್ಟದವರೆಗೆ ಯೋಗಾಸನಗಳ ಬಗ್ಗೆ ಸ್ಪರ್ಧೆಗಳನ್ನು ಏರ್ಪಡಿಸಿ ರಾಜ್ಯ ಮಟ್ಟದಲ್ಲಿ ಆಯ್ಕೆಯಾದ ಮಕ್ಕಳನ್ನು ಸ್ಕೂಲ್ ಗೇಮ್ ಫೆಡರೇಶನ್ ಸಂಸ್ಥೆ ನಡೆಸುವ ರಾಷ್ಟ್ರ ಮಟ್ಟದ ಸ್ಪರ್ಧೆಗಳಿಗೂ ಮಕ್ಕಳನ್ನು ಕಳುಹಿಸಲಾಗುತ್ತಿದೆ.

ಹೆಣ್ಣು ಮಕ್ಕಳ ಕಾಲೇಜಿನಲ್ಲಿ ಮೂಲಭೂತ ಸೌಕರ್ಯ

1385(1408); ಶ್ರೀ ಲೋಬೋ ಜೆ.ಆರ್

ಅ) ಮಂಗಳೂರಿನಲ್ಲಿ ಬಲ್ಮಠದಲ್ಲಿ ಸರ್ಕಾರಿ ಹೆಣ್ಣುಮಕ್ಕಳ ಕಾಲೇಜಿನಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಕಾಲೇಜಿನಲ್ಲಿ ತರಗತಿಗಳಿಗೆ ಕಟ್ಟಡ ನಿರ್ಮಾಣ, ಲೈಬ್ರರಿ ಮತ್ತು ಕಂಪ್ಯೂಟರ್ ಸೌಲಭ್ಯಕ್ಕೆ ಸರ್ಕಾರ ಏನು ಕ್ರಮ ಜರುಗಿಸುತ್ತಿದೆ;

ಇ) ವಿದ್ಯಾರ್ಥಿನಿಯರುಗಳಿಗೆ ಆಟದ ಮೈದಾನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ಸದರಿ ಕಾಲೇಜು ಸ್ವಂತ ನಿವೇಶನ ಹೊಂದಿರುವುದಿಲ್ಲ. ಸ್ವಂತ ನಿವೇಶನ ಪಡೆಯಲು ಅಗತ್ಯ ಕ್ರಮಕೈಗೊಳಳಲಾಗಿದ್ದು, ನಿವೇಶನ ದೊರೆತ ಕೂಡಲೇ ಕಟ್ಟಡ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು. ಕಾಲೇಜಿನಲ್ಲಿ ಲೈಬ್ರರಿ ಸೌಲಭ್ಯವಿದೆ ಹಾಗೂ 25 ಕಂಪ್ಯೂಟರ್‌ಗಳು ಕಾರ್ಯ ನಿರ್ವಹಿಸುತ್ತಿವೆ.